ಸಂಜೆವಾಣಿ
1982 ರಿಂದ ನಿಮ್ಮ ಸೇವೆಯಲ್ಲಿ

# ವಿದ್ಯಾರ್ಥಿ ವೇತನ ವಿತರಣೆ

ಬೆಂಗಳೂರು, ಫೆ. 19– ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಉತ್ತೇಜನಗೊಳಿಸುವ ಸಲುವಾಗಿ ಜೈನ್ ವಿಶ್ವವಿದ್ಯಾನಿಲಯ 169 ಪ್ರತಿಭಾವಂತ ವಿದ್ಯಾರ್ಥಿಗಳಿಗೆ 50 ಲಕ್ಷ ರೂ. ಮೊತ್ತದ ವಿದ್ಯಾರ್ಥಿ ವೇತನವನ್ನು ವಿತರಿಸಿದೆ.

ನಗರದಲ್ಲಿ ನಡೆದ ವಿದ್ಯಾರ್ಥಿ ವೇತನ ಉದ್ಘಾಟನಾ ಸಮಾರಂಭದಲ್ಲಿ ಜೈನ್ ವಿವಿ ಉಪಕುಲಪತಿ ಡಾ. ಎನ್. ಸುಂದರರಾಜನ್ ಅವರು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ವಿತರಿಸಿದರು.

ಒಬ್ಬ ವಿದ್ಯಾರ್ಥಿಯ ಜೀವನದಲ್ಲಿ ವಿದ್ಯಾರ್ಥಿ ವೇತನದ ಮೌಲ್ಯವು ತುಂಬಾ ಮುಖ್ಯವಾದುದು ಎಂದವರು ಕಿವಿಮಾತು ಹೇಳಿದರು.

ಜೈನ್ ವಿವಿ ಈವರೆಗೆ 4.5 ಕೋಟಿಗಳಷ್ಟು ವಿದ್ಯಾರ್ಥಿ ವೇತನವನ್ನು ವಿತರಿಸಿದೆ ಎಂದರು. ಈ ಸಂದರ್ಭದಲ್ಲಿ ವಿದ್ಯಾರ್ಥಿ ವೇತನ ಸ್ವೀಕರಿಸಿದ ವಿದ್ಯಾರ್ಥಿಗಳಾದ ಹರ್ಷವರ್ಧನ್, ಮುರುಳಿಕೃಷ್ಣ, ಡಿಂಪಲ್ ಕುಮಾರಿ ಮತ್ತಿತರ ವಿದ್ಯಾರ್ಥಿಗಳು ಈ ಮೊತ್ತವನ್ನು ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗಿದೆ ಎಂದವರು ಹರ್ಷ ವ್ಯಕ್ತಪಡಿಸಿದರು.